**All India Radio: Bangalore**
**Regional Bulletin In Kannada**
**21.12.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು :

1. ಕ್ರೀಡಾ ಮೀಸಲಾತಿ ಅಡಿಯಲ್ಲಿ ಸರ್ಕಾರಿ ಉದ್ಯೋಗ ನೇಮಕಾತಿಗೆ ಜನವರಿಯಲ್ಲಿ ಆದೇಶ : ಮುಖ್ಯಮಂತ್ರಿ ಸಿದ್ಧರಾಮಯ್ಯ
2. ರಾಜ್ಯಾದ್ಯಂತ ಪಲ್ಸ್ ಪೋಲಿಯೋ ಅಭಿಯಾನ; ವಿವಿಧೆಡೆ ಹಲವು ಸಚಿವರು ಭಾಗಿ
3. ಮಳವಳ್ಳಿಯ ಶಿವರಾತ್ರಿ ಶ್ರೀಗಳ ೧೦೬೬ನೇ ಜಯಂತೋತ್ಸವಕ್ಕೆ ತೆರೆ : ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಭಾಗಿ
4. ವ್ಯಕ್ತಿಯ ಸ್ವಾತಂತ್ರ್ಯ ಹರಣ ಮಾಡಲು ದ್ವೇಷ ಭಾಷಣ ನಿಯಂತ್ರಣ ಕಾನೂನನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದೆ ; ಸಂಸದ ಬಸವರಾಜ ಬೊಮ್ಮಾಯಿ ಆರೋಪ

<><><><>

ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಪಡೆದವರಿಗೆ ೬ ಕೋಟಿ ರೂ.ನಗದು ಬಹುಮಾನ ಘೋಷಿಸಲಾಗಿದ್ದು, ಕರ್ನಾಟಕದ ಕ್ರೀಡಾಪಟುಗಳು ಚಿನ್ನದ ಪದಕ ಗೆಲ್ಲುವರೆಂಬ ವಿಶ್ವಾಸವಿದೆ ಎಂದು ತಿಳಿಸಿದರು. ಅವರು ಇಂದು ಕರ್ನಾಟಕ ಒಲಂಪಿಕ್ಸ್ ಸಂಸ್ಥೆ ಬೆಂಗಳೂರು ಇವರ ವತಿಯಿಂದ ಲೋಕಭವನದಲ್ಲಿ ನಡೆದ ಕರ್ನಾಟಕ ಒಲಂಪಿಕ್ ೨೦೨೫ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಕರ್ನಾಟಕ ಒಲಂಪಿಕ್ಸ್ ಸಂಸ್ಥೆ ವತಿಯಿಂದ ನೀಡಲಾಗುತ್ತಿರುವ ಕರ್ನಾಟಕ ಒಲಂಪಿಕ್ ೨೦೨೫ ಪ್ರಶಸ್ತಿಗೆ ಭಾಜನರಾಗಿರುವ ಕ್ರೀಡಾ ಸಾಧಕರಿಗೆ ಅಭಿನಂದಿಸಿದ ಮುಖ್ಯಮಂತ್ರಿಗಳು, ೧೯೫೮ರಲ್ಲಿ ಪ್ರಾರಂಭವಾದ ಒಲಂಪಿಕ್ಸ್ ಸಂಸ್ಥೆ ಇಲ್ಲಿಯವರೆಗೆ ಕ್ರೀಡಾ ಕ್ಷೇತ್ರದ ಅಭಿವೃದ್ಧಿಗೆ ಕೊಡುಗೆ ನೀಡುತ್ತಾ ಬಂದಿದೆ. ಇಡೀ ದೇಶದಲ್ಲಿಯೇ ಆಂಧ್ರ ಮತ್ತು ಕೇರಳ ರಾಜ್ಯದಂತೆ ಕರ್ನಾಟಕದಲ್ಲಿಯೂ ಸಂಸ್ಥೆಯು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ. ಕರ್ನಾಟಕ ಒಲಂಪಿಕ್ಸ್ ಸಂಸ್ಥೆಯು ಎಲ್ಲಾ ಕ್ರೀಡೆಗಳಿಗೆ ಪ್ರೋತ್ಸಾಹ ನೀಡುತ್ತಿದೆ ಎಂದು ಅವರು ತಿಳಿಸಿದರು. ಸರ್ಕಾರ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಒತ್ತು ನೀಡುತ್ತಿದೆ. ಒಲಂಪಿಕ್ಸ್ ಕ್ರೀಡಾಕೂಟದಲ್ಲಿ ಚಿನ್ನದಪದಕ ಗೆಲ್ಲುವ ರಾಜ್ಯದ ಕ್ರೀಡಾಪಟುಗಳಿಗೆ ೬ ಕೋಟಿ ರೂಪಾಯಿಗಳ ನಗದು ಬಹುಮಾನವನ್ನು ಘೋಷಿಸಲಾಗಿದೆ. ಅಂತೆಯೇ ಬೆಳ್ಳಿ ಪದಕ ಪಡೆದರೆ ೪ ಕೋಟಿ ರೂಪಾಯಿ ಹಾಗೂ ಕಂಚಿನ ಪದಕ ಗೆದ್ದರೆ ೩ ಕೋಟಿ ರೂಪಾಯಿ ನಗದು ಬಹುಮಾನವನ್ನು ಸರ್ಕಾರ ಘೋಷಿಸಿದೆ. ಕರ್ನಾಟಕದ ಕ್ರೀಡಾಪಟುಗಳಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಸರ್ಕಾರ ಈ ಕ್ರಮ ಕೈಗೊಂಡಿದೆ ಎಂದು ಮುಖ್ಯಮಂತ್ರಿ ತಿಳಿಸಿದರು. ಕ್ರೀಡಾಪಟುಗಳಿಗೆ ಸರ್ಕಾರದ ನೇಮಕಾತಿಯಲ್ಲಿಯೂ ಮೀಸಲಾತಿಯನ್ನು ಒದಗಿಸಿದೆ. ಪೊಲೀಸ್ ಹಾಗೂ ಅರಣ್ಯ ಇಲಾಖೆಯಲ್ಲಿ ಶೇಕಡಾ ೩ ರಷ್ಟು ಹಾಗೂ ಇನ್ನುಳಿದ ಇಲಾಖೆಗಳಲ್ಲಿ ಶೇಕಡಾ ೨ರಷ್ಟು ಕ್ರೀಡಾಪಟುಗಳಿಗೆ ಮೀಸಲಾತಿ ನೀಡಲಾಗುವುದು. ಜನವರಿಯಲ್ಲಿ ಕ್ರೀಡಾಮೀಸಲಾತಿಯಡಿಯಲ್ಲಿ ಸರ್ಕಾರಿ ಉದ್ಯೋಗದ ನೇಮಕಾತಿಗೆ ಸರ್ಕಾರಿ ಆದೇಶವನ್ನು ಹೊರಡಿಸಲಾಗುತ್ತದೆ ಎಂದು ಅವರು ಹೇಳಿದರು.

<><><><>

ರಾಷ್ಟ್ರೀಯ ಪಲ್ಸ್ ಪೊಲಿಯೋ ಲಸಿಕಾ ದಿನವಾದ ಇಂದು ರಾಜ್ಯಾದ್ಯಂತ ೫ ವರ್ಷದೊಳಗಿನ ಮಕ್ಕಳಿಗೆ ಪೊಲಿಯೋ ಹನಿ ನೀಡುವ ಕಾರ್ಯಕ್ರಮಗಳನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕುಟುಂಬ ಕಲ್ಯಾಣ ಇಲಾಖೆಗಳ ವತಿಯಿಂದ ಹಮ್ಮಿಕೊಳ್ಳಲಾಗಿತ್ತು. ಭಾರತ ಪೋಲಿಯೋ ಮುಕ್ತ ದೇಶವಾಗಿದ್ದು, ಎರಡು ಹನಿ ಪೋಲಿಯೋ ಲಸಿಕೆ ಮಕ್ಕಳ ಅಂಗ ವೈಫಲ್ಯತೆ ತಪ್ಪಿಸಿ ಮಕ್ಕಳ ಸರ್ವತೋಮುಖ ಹಾಗೂ ಸರ್ವಾಂಗೀಣ ಬೆಳವಣಿಗೆಗೆ ಕಾರಣವಾಗುತ್ತದೆ ಎಂದು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದ್ದಾರೆ.

ಗೋಕಾಕಿನ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಆವರಣದಲ್ಲಿ ಇಂದು ಜರುಗಿದ ಬೆಳಗಾವಿ ಜಿಲ್ಲಾ ಮಟ್ಟದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನಕ್ಕೆ ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹನಿ ಹಾಕುವ ಮೂಲಕ ಚಾಲನೆ ನೀಡಿದರು. ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನದಿಂದಾಗಿ ದೇಶದಲ್ಲಿ ಮಕ್ಕಳು ಶಾಶ್ವತ ಅಂಗವೈಕಲ್ಯಕ್ಕೆ ತುತ್ತಾಗುವ ಪ್ರಮಾಣ ಹಂತ ಹಂತವಾಗಿ ಕಡಿಮೆಯಾಗುತ್ತಿದ್ದು, ಪೋಷಕರು ತಮ್ಮ ಜವಾಬ್ದಾರಿಯನ್ನು ಅರಿತು ಐದು ವರ್ಷದೊಳಗಿನ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಭಾರತವನ್ನು ಪೋಲಿಯೋ ಮುಕ್ತ ಮಾಡುವ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಪ್ರಯತ್ನಗಳನ್ನು ಸಫಲಗೊಳಿಸಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲೆ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ಶಾಸಕ ಬಿ.ಎನ್.ರವಿಕುಮಾರ್ ಮನವಿ ಮಾಡಿದ್ದಾರೆ. ಶಿಡ್ಲಘಟ್ಟ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್ ಹಾಗೂ ಆರೋಗ್ಯ ಇಲಾಖೆ ಸಹಯೋಗದಲ್ಲಿ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಇಂದು ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನಕ್ಕೆ ಮಗುವೊಂದಕ್ಕೆ ಬಾಯಿಗೆ ಲಸಿಕೆ ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪೋಲಿಯೋ ಲಸಿಕೆ ಬಹಳ ಮುಖ್ಯ, ೫ ವರ್ಷದೊಳಗಿನ ಮಕ್ಕಳಿಗೆ ಎಲ್ಲಾ ತಾಯಂದಿರು ತಪ್ಪದೆ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಹಾಸನದ ಹಿಮ್ಸ್ ಆವರಣದಲ್ಲಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಪಲ್ಸ್ ಪೋಲಿಯೋ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಶಾಸಕ ಸ್ವರೂಪ್ ಪ್ರಕಾಶ್ ಕರೆ ನೀಡಿದರು. ವಿಧಾನ ಪರಿಷತ್ ಶಾಸಕ ಪಿ.ಎಚ್. ಪೂಜಾರ ಉಪಸ್ಥಿತರಿದ್ದರು. ಬಾಗಲಕೋಟೆ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪೋಲಿಯೋ ಲಸಿಕಾ ಅಭಿಯಾನಕ್ಕೆ ಮಕ್ಕಳಿಗೆ ಪೊಲೀಯೋ ಹನಿ ಹಾಕುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಮಗು ಆರೋಗ್ಯವಂತವಾಗಿ ಬೆಳೆದರೆ ಮಾತ್ರ ಸದೃಢ ಸಮಾಜದ ನಿರ್ಮಾಣಕ್ಕೆ ಕೊಡುಗೆ ನೀಡಲು ಸಾಧ್ಯವಾಗುತ್ತದೆ ಎಂದರು.ಭಾರತ ಪೊಲಿಯೊ ಮುಕ್ತವಾದ ರಾಷ್ಟ್ರವಾಗಿದೆ ಅಕ್ಕ ಪಕ್ಕದ ದೇಶದಲ್ಲಿ ಪೋಲಿಯೋ ಸೊಂಕು ಕಂಡುಬಂದಿದ್ದು ನಮ್ಮ ದೇಶದಲ್ಲಿ ಹರಡ ಬಾರದು ಎನ್ನುವ ಉದ್ದೇಶದಿಂದ ಮುಂಜಾಗ್ರತೆಯಿಂದ ಲಸಿಕಾ ಅಭಿಯಾನ ನಡೆಯುತ್ತಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಹೇಳಿದರು. ದಾವಣಗೆರೆಯ ಎಸ್‌ಎಂ ಕೃಷ್ಣ ನಗರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ವಿಠ್ಠಲ ಮಾಧವ ರಾವ್ ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ ನೀಡಿದರು. ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿರವರು ಪಲ್ಸ್ ಪೊಲೀಯೊ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮಕ್ಕಳಿಗೆ ಪೋಲಿಯೋ ಹನಿ ಹಾಕಿದರು. ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ ಇಂದು ಕಾರವಾರದ ಜಿಲ್ಲಾ ಆಸ್ಪತ್ರೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಂಸಿಎ ಅಧ್ಯಕ್ಷ ಹಾಗೂ ಶಾಸಕ ಸತೀಶ ಸೈಲ್ ಮಕ್ಕಳಿಗೆ ಲಸಿಕೆ ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ವಿಧಾನ ಪರಿಷತ್ ಶಾಸಕ ಗಣಪತಿ ಉಳ್ವೇಕರ್ ಮತ್ತಿತರರು ಉಪಸ್ಥಿತರಿದ್ದರು.

<><><><>

ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಹಿನ್ನಲೆಯಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಇಂದು ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಆದಿಚುಂಚನಗಿರಿಗೆ ಭೇಟಿ ನೀಡಿದ್ದ ಅವರು, ಕಾಲಭೈರವೇಶ್ವರನ ದರ್ಶನ ಪಡೆದು ಮಠದ ಪೀಠಾಧಿಪತಿ ನಿರ್ಮಲಾನಂದ ಶ್ರೀಗಳೊಂದಿಗೆ ಕೆಲ ಹೊತ್ತು ಮಾತುಕತೆ ನಡೆಸಿದ ಬಳಿಕ ಶ್ರೀಮಠದ ಆವರಣದಲ್ಲಿ ಏರ್ಪಡಿಸಿದ್ದ ಪೋಲಿಯೋ ಲಸಿಕೆ ಹಾಕುವ ಸ್ಥಳಕ್ಕೆ ಭೇಟಿ ಮಕ್ಕಳಿಗೆ ಖುದ್ದು ತಾವೇ ಲಸಿಕೆ ಹಾಕಿದರು.

<><><><>

ಕಳೆದ ಆರು ದಿನಗಳಿಂದ ಮಂಡ್ಯ ಜಿಲ್ಲೆ ಮಳವಳ್ಳಿ ಪಟ್ಟಣದಲ್ಲಿ ನಡೆದ ಆದಿಜಗದ್ಗುರು ಶಿವರಾತ್ರಿ ಶಿವಯೋಗಿಶ್ರೀಗಳ ೧೦೬೬ನೇ ಜಯಂತೋತ್ಸವದ ಸಮಾರೋಪ ಇಂದು ಸಂಜೆ ಯಶಸ್ವಿಯಾಗಿ ನಡೆಯಿತು. ಸಮಾರೋಪ ಸಮಾರಂಭವನ್ನು ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಆದಿಜಗದ್ಗುರು ಶಿವರಾತ್ರಿ ಶಿವಯೋಗಿಶ್ರೀಗಳ ಸಾಮಾಜಿಕ ಕೈಂಕರ್ಯಗಳನ್ನು ಬಣ್ಣಿಸಿದರು. ಜೊತೆಗೆ ಪ್ರಸ್ತುತ ಸುತ್ತೂರಿನ ವೀರಸಿಂಹಾಸನ ಮಠದ ಪೀಠಾಧಿಪತಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಶಿವಯೋಗಿ ಸ್ವಾಮೀಜಿಗಳು ಹಿರಿಯ ಶ್ರೀಗಳು ಹಾಕಿಕೊಟ್ಟ ಮಾರ್ಗದರ್ಶನದಂತೆ ಶ್ರೀಮಠವನ್ನು ಸಾಮಾಜಿಕ ಕೆಲಸಗಳಿಗೆ ಮೀಸಲಿಟ್ಟಿದ್ದಾರೆ ಎಂದು ಶ್ಲಾಘಿಸಿದರು. ಇದಕ್ಕೂ ಮುನ್ನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಳವಳ್ಳಿಯಲ್ಲಿ ಪ್ರಜಾಸೌಧಕ್ಕೆ ಶಂಕುಸ್ಥಾಪನೆ ನೆರವೇರಿಸಿದರು. ಈ ಸಂದರ್ಭದಲ್ಲಿ ಸಚಿವರಾದ ಎನ್.ಚಲುವರಾಯಸ್ವಾಮಿ, ಹೆಚ್.ಸಿ.ಮಹದೇವಪ್ಪ, ಶಾಸಕರಾದ ನರೇಂದ್ರಸ್ವಾಮಿ, ರವಿಗಣಿಗ, ರಮೇಶ್ ಬಂಡಿಸಿದ್ದೇಗೌಡ, ಉದಯ್, ಗಣೇಶ್ ಪ್ರಸಾದ್ ಸೇರಿದಂತೆ ಹಲವರು ಮಂದಿ ಭಾಗವಹಿಸಿದ್ದರು.

<><><><>

ವಿಜಯನಗರದಲ್ಲಿ ಬಜೆಟ್ ಪೂರ್ವ ಚರ್ಚೆ ನಡೆಸುವುದರ ಮೂಲಕ ವಿಕಸಿತ ಭಾರತ ೨೦೪೭ ರ ಕನಸಿಗೆ ಸ್ಫೂರ್ತಿ ತುಂಬಿಕೊಂಡು ಹೋಗುತ್ತಿದ್ದೇನೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹರ್ಷ ವ್ಯಕ್ತಪಡಿಸಿದ್ದಾರೆ. ವಿಜಯನಗರ ಸಾಮ್ರಾಜ್ಯದಲ್ಲಿ ಜನ ಹೇಗೆ ಸಂಪತ್‌ಭರಿತರಾಗಿ ಬದುಕುತ್ತಿದ್ದರೋ ಹಾಗೆ ಪ್ರಧಾನಿ ನರೇಂದ್ರ ಮೋದಿ ಅವರ ಕನಸು ಕೂಡ ಜನರು ಸೌಖ್ಯದಿಂದ ಜೀವಿಸುವುದಾಗಿದೆ. ಈ ಹಿನ್ನೆಲೆಯಲ್ಲಿ ಎರಡು ದಿನಗಳ ಕಾಲ ಬಜೆಟ್ ಪೂರ್ವ ಹಣಕಾಸು ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿರುವುದು ಸಂತಸ ತಂದಿದೆ ಎಂದು ಅವರು ತಿಳಿಸಿದರು.

ಧ್ವನಿ : ನಿರ್ಮಲಾ ಸೀತಾರಾಮನ್, ಹಣಕಾಸು ಸಚಿವೆ

ಬಳಿಕ ಅವರು ವಿಜಯಾಪುರದ ಹಸರೀಕರಣಕ್ಕಾಗಿ ಹುಣಸೆ ಸಸಿಯನ್ನು ನೆಟ್ಟರು.

<><><><>

ವ್ಯಕ್ತಿಯ ಸ್ವಾತಂತ್ರ್ಯ ಹರಣ ಮಾಡಲು ಸಂವಿಧಾನ ವಿರೋಧಿ ದ್ವೇಷ ಭಾಷಣ ನಿಯಂತ್ರಣ ಕಾನೂನನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದೆ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದರು. ಗದಗ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಯಾವುದೇ ರೀತಿಯ ಅಭಿವೃದ್ಧಿ ಮಾಡಿಲ್ಲ. ಯಾವ ಇಲಾಖೆಯಲ್ಲಿಯೂ ಕೆಲಸ ಆಗುತ್ತಿಲ್ಲ. ಭ್ರಷ್ಟಾಚಾರ ಹೆಚ್ಚಾಗಿದೆ. ಜನರು ಇದನ್ನು ವಿರೋಧ ಮಾಡಬಾರದು ಎಂದು ದ್ವೇಷ ಭಾಷಣದ ವಿರುದ್ಧ ಕಾನೂನು ಮಾಡಿದ್ದಾರೆ ಎಂದರು.

<><><><>

ಕಾರವಾರದ ರವೀಂದ್ರನಾಥ ಟ್ಯಾಗೋರ್ ಕಡಲತೀರದಲ್ಲಿ ನಾಳೆಯಿಂದ ಇದೇ ೨೮ ರವರೆಗೆ ಕರಾವಳಿ ಉತ್ಸವ ಸಪ್ತಾಹ-೨೦೨೫ನ್ನು ಆಯೋಜಿಸಲಾಗಿದೆ ಎಂದು ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ತಿಳಿಸಿದ್ದಾರೆ. ಈ ಬಗ್ಗೆ ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕರಾವಳಿ ಉತ್ಸವದ ಕುರಿತು ಮಾಹಿತಿ ನೀಡಿದ ಅವರು, ನಾಳೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>